**All India Radio: Bangalore**
**National Bulletin In Kannada**
**04.05.2026  13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**04.05.2026  13.10 hrs**

**<>><><*><><<>**

ಮುಖ್ಯಾಂಶಗಳು

**೧. ಪಂಚ ರಾಜ್ಯ ವಿಧಾನಸಭಾ ಚುನಾವಣಾ ಮತ ಎಣಿಕೆ ; ಅಸ್ಸಾಂ, ಪಶ್ಚಿಮ ಬಂಗಾಳದಲ್ಲಿ ಬಿಜೆಪಿ, ತಮಿಳುನಾಡಿನಲ್ಲಿ ಟಿವಿಕೆ, ಕೇರಳಂನಲ್ಲಿ ಯುಡಿಎಫ್ ಮೈತ್ರಿಕೂಟ ಮುನ್ನಡೆ**

**೨. ವಿಧಾನಸಭಾ ಉಪಚುನಾವಣೆ; ಕರ್ನಾಟಕದ ಬಾಗಲಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಗೆಲುವು, ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಮುನ್ನಡೆ**

**೩. ಲಿಬುಲೇಖ್ ಪಾಸ್ ಕುರಿತ ನೇಪಾಳದ ವಾದವನ್ನು ತಳ್ಳಿಹಾಕಿದ ಭಾರತ**

**೪. ಪ್ರಯಾಗ್‌ರಾಜ್‌ನಲ್ಲಿ ನಾರ್ಥ್‌ಟೆಕ್ ಸಿಂಪೋಜಿಯಂ ವಿಚಾರ ಸಂಕಿರಣ ಉದ್ಘಾಟಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೫. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ಮುಂಬೈ ಇಂಡಿಯನ್ಸ್, ಲಖನೌ ಸೂಪರ್ ಜೈಂಟ್ಸ್ ಹಣಾಹಣಿ**

**<>><><*><><<>**

ದೇಶದ ಕುತೂಹಲ ಕೆರಳಿಸಿರುವ ನಾಲ್ಕು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆ ಮತ್ತು ಐದು ರಾಜ್ಯಗಳ ಏಳು ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯ ಮತ ಎಣಿಕೆ ಪ್ರಕ್ರಿಯೆ ಭರದಿಂದ ಸಾಗಿದೆ.  ಪಶ್ಚಿಮ ಬಂಗಾಳದಲ್ಲಿ ಆಡಳಿತರೂಢ ತೃಣಮೂಲ ಕಾಂಗ್ರೆಸ್‌ಗೆ ಬಿಜೆಪಿ ಪಕ್ಷ ಬಿಗಿ ಪೈಪೋಟಿ ನೀಡಿದ್ದು, ೨೭೯ ಕ್ಷೇತ್ರಗಳ ಮಾಹಿತಿಯ ಪ್ರಕಾರ ಬಿಜೆಪಿ ಪಕ್ಷ ೧೮೩ ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿವೆ. ತಮಿಳುನಾಡಿನಲ್ಲಿ ನಟ ವಿಜಯ್ ನೇತೃತ್ವದ ಹೊಸ ಪಕ್ಷ ತಮಿಳಗ ವೆಟ್ರಿ ಕಾಳಗಂ-ಟಿವಿಕೆ ಮೊದಲ ಚುನಾವಣೆಯಲ್ಲಿ ಗಮನಾರ್ಹ ಮುನ್ನಡೆ ಕಾಯ್ದುಕೊಂಡಿದೆ. ಕೇರಳಂನಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಪಕ್ಷ ಮುನ್ನಡೆಯಲ್ಲಿದ್ದರೆ ಅಸ್ಸಾಂನಲ್ಲಿ ಬಿಜೆಪಿ ಗಮನಾರ್ಹ ಮುನ್ನಡೆಯಲ್ಲಿದೆ.  ಇಸಿಐ ನೆಟ್‌ನಲ್ಲಿ ಲಭ್ಯವಿರುವ ಇತ್ತೀಚಿನ ಅಂಕಿ-ಅಂಶಗಳ ಪ್ರಕಾರ, ಪಶ್ಚಿಮಬಂಗಾಳದಲ್ಲಿ ಸದ್ಯಕ್ಕೆ ಮಾಹಿತಿ ಲಭ್ಯವಿರುವ ೨೭೯ ಕ್ಷೇತ್ರಗಳ

ಪೈಕಿ, ಬಿಜೆಪಿ ೧೮೩ ರಲ್ಲಿ ತೃಣಮೂಲ ಕಾಂಗ್ರೆಸ್ ೯೧, ಕಾಂಗ್ರೆಸ್ ೨ ಹಾಗೂ ಇತರೆ ಪಕ್ಷಗಳು ೨ ಸ್ಥಾನಗಳಲ್ಲಿ ಮುನ್ನಡೆಯಲ್ಲಿವೆ. ಕೇರಳಂದಲ್ಲಿ ಒಟ್ಟು ಇರುವ ೧೪೦ ಸ್ಥಾನಗಳ ಕುರಿತು ವರದಿ ಬಂದಿದ್ದು, ಕಾಂಗ್ರೆಸ್ ನೇತೃತ್ವದ ಯುಡಿಎಫ್ ಮೈತ್ರಿಕೂಟ ೬೩ ಸ್ಥಾನಗಳಲ್ಲಿ, ಎಲ್‌ಡಿಎಫ್ ಮೈತ್ರಿಕೂಟ ೨೫, ಇಂಡಿಯನ್ ಮುಸ್ಲಿಂ ಲೀಗ್ ೨೩ ಹಾಗೂ ಬಿಜೆಪಿ ೦೨ ಸ್ಥಾನದಲ್ಲಿ ಮುನ್ನಡೆಯಲ್ಲಿದೆ. ತಮಿಳುನಾಡಿನಲ್ಲಿ ಸದ್ಯಕ್ಕೆ ಲಭ್ಯವಾಗಿರುವ ೨೩೪ ಕ್ಷೇತ್ರಗಳ ಮಾಹಿತಿ ಪ್ರಕಾರ ಡಿಎಂಕೆ ಮೈತ್ರಿಕೂಟ ೪೯, ಎಐಎಡಿಎಂಕೆ ಮೈತ್ರಿಕೂಟ ೫೮ ಟಿವಿಕೆ ೧೦೭ ರಲ್ಲಿ ಮುನ್ನಡೆಯಲ್ಲಿದೆ. ಪುದುಚೇರಿಯಲ್ಲಿ ಸದ್ಯಕ್ಕೆ ಲಭ್ಯವಾಗಿರುವ ೧೭ ಕ್ಷೇತ್ರಗಳ ಮಾಹಿತಿ ಪ್ರಕಾರ ಎಐಎನ್‌ಆರ್‌ಸಿ ಹಾಗೂ ಮಿತ್ರಪಕ್ಷಗಳು ೩ ರಲ್ಲಿ ಗೆದ್ದು, ೬ರಲ್ಲಿ ಮುನ್ನಡೆ ಸಾಧಿಸಿದೆ. ಕಾಂಗ್ರೆಸ್, ಭಾರತೀಯ ಜನತಾ ಪಾರ್ಟಿ, ಎಐಎಡಿಎಂಕೆ, ಡಿಎಂಕೆ ಪಕ್ಷಗಳು ತಲಾ ೧ ರಲ್ಲಿ ಗೆಲುವು ಸಾಧಿಸಿದೆ. ಅಸ್ಸಾಂನಲ್ಲಿ ಸದ್ಯಕ್ಕೆ ಲಭ್ಯವಾಗಿರುವ ೧೨೬ ಕ್ಷೇತ್ರಗಳ ಮಾಹಿತಿ ಪ್ರಕಾರ ಬಿಜೆಪಿ ೭೯ ಕಾಂಗ್ರೆಸ್ ೨೪ ಹಾಗೂ ಎಐಯುಡಿಎಫ್ ೦೨, ಬೊಡೊಲ್ಯಾಂಡ್ ಪೀಪಲ್ಸ್ ಫ್ರೆಂಟ್ ೧೦ ರಲ್ಲಿ ಮುನ್ನಡೆಯಲ್ಲಿದೆ.

<>><><*><><<>

ವಿಧಾನಸಭಾ ಚುನಾವಣೆಯ ಆರಂಭಿಕ ಮುನ್ನಡೆಗಳ ಕುರಿತು ಪ್ರತಿಕ್ರಿಯಿಸಿರುವ ಬಿಜೆಪಿ ವಕ್ತಾರ ತುಹಿನ್ ಸಿನ್ಹಾ, ಪ್ರಸ್ತುತ ಲಭ್ಯವಿರುವ ಫಲಿತಾಂಶದ ಮುನ್ಸೂಚನೆಗಳು ಸಂಪೂರ್ಣವಾಗಿ ಬಿಜೆಪಿ ಪರವಾಗಿದೆ. ಅಸ್ಸಾಂ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಲ್ಲಿ ಬಿಜೆಪಿ ಭಾರೀ ಅಂತರದಿಂದ ಜಯ ದಾಖಲಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಇತ್ತೀಚಿನ ಚುನಾವಣಾ ಫಲಿತಾಂಶಗಳಲ್ಲಿ ಎನ್‌ಡಿಎ ಮೈತ್ರಿಕೂಟ ಪ್ರದರ್ಶನ ಜನರಿಗಿರುವ ಬೆಳೆಯುತ್ತಿರುವ ನಂಬಿಕೆಗಳನ್ನು ಪ್ರತಿಬಿಂಬಿಸುತ್ತದೆ ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್.ಚಂದ್ರಬಾಬು ನಾಯ್ಡು ತಿಳಿಸಿದ್ದಾರೆ. ಎನ್‌ಡಿಎ ಮೈತ್ರಿಕೂಟ, ಅಭಿವೃದ್ಧಿ ಮತ್ತು ವಿಕಸಿತ ಭಾರತದ ದೃಷ್ಟಿಕೋನದ ಮೇಲೆ ಗಮನ ಹರಿಸಿದೆ ಎಂದು ಹೇಳಿದ್ದಾರೆ.

<>><><*><><<>

ಐದು ರಾಜ್ಯಗಳ ಏಳು ವಿಧಾನಸಭಾ ಕ್ಷೇತ್ರಗಳಿಗೆ ನಡೆದ ಉಪಚುನಾವಣೆಯ ಮತ ಎಣಿಕೆ ಕಾರ್ಯ ಭರದಿಂದ ಸಾಗಿದ್ದು, ಕೆಲವು ಕ್ಷೇತ್ರಗಳ ಫಲಿತಾಂಶಗಳು ಈಗಾಗಲೇ ಲಭ್ಯವಾಗಿದೆ. ಕರ್ನಾಟಕದ ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯ ಫಲಿತಾಂಶ ಪ್ರಕಟವಾಗಿದ್ದು, ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಜಯ ದಾಖಲಿಸಿದ್ದಾರೆ. ೨೩ನೇ ಹಾಗೂ ಕೊನೆಯ ಸುತ್ತಿನ ಮತ ಎಣಿಕೆ ಪುರ್ಣಗೊಂಡ ಬಳಿಕ, ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ೨೧ ಸಾವಿರದ ೮೬೬

ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಗೆ ಒಟ್ಟು ೯೭ ಸಾವಿರದ ೯೪೧ ಮತಗಳು ಲಭಿಸಿದ್ದರೆ, ಬಿಜೆಪಿ ಅಭ್ಯರ್ಥಿಗೆ ೭೬ ಸಾವಿರದ ೭೫ ಮತಗಳು ಬಂದಿವೆ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ೧೨ನೇ ಸುತ್ತಿನ ಮತ ಎಣಿಕೆ ಅಂತ್ಯಕ್ಕೆ ಕಾಂಗ್ರೆಸ್ ಅಭ್ಯರ್ಥಿ ಬಿಜೆಪಿ ಅಭ್ಯರ್ಥಿ ವಿರುದ್ಧ ೯ ಸಾವಿರದ ೯೫೨ ಮತಗಳ ಅಂತರದಲ್ಲಿ ಮುನ್ನಡೆಯಲಿದ್ದಾರೆ.  ಈ ನಡುವೆ ತ್ರಿಪೂರದ ಧರಂನಗರ್, ವಿಧಾನಸಭಾ ಉಪ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಜಹರ್ ಚಕ್ರವರ್ತಿ ಗೆಲುವು ದಾಖಲಿಸಿದ್ದಾರೆ. ಅವರು, ತಮ್ಮ ಪ್ರತಿ ಸ್ಪರ್ಧಿ, ಸಿಪಿಐಎಂನ ಅಮಿತಾಬ್ ದತ್ತ ವಿರುದ್ಧ ಕೇವಲ ೧೮ ಸಾವಿರ ಮತಗಳ ಅಂತರದಲ್ಲಿ ಗೆಲುವು ದಾಖಲಿಸಿದ್ದಾರೆ.

**<>><><*><><<>**

ಕೈಲಾಸ ಮಾನಸ ಸರೋವರ ಯಾತ್ರೆಯ ಸಂದರ್ಭದಲ್ಲಿ ಲಿಪುಲೇಖ್ ಪಾಸ್ ವಿಷಯವಾಗಿ ನೇಪಾಳ ಮಾಡಿರುವ ಹಕ್ಕು ಪ್ರತಿಪಾದನೆಯನ್ನು ಭಾರತ ಸರ್ಕಾರ ಕಟ್ಟುನಿಟ್ಟಾಗಿ ನಿರಾಕರಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರು, ಲಿಪುಲೇಖ್ ಪಾಸ್ ೧೯೫೪ ರಿಂದಲೂ ಯಾತ್ರಿಕರು ಬಳಸುತ್ತಿರುವ ಸಾಂಪ್ರದಾಯಿಕ ಮಾರ್ಗವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ದಶಕಗಳಿಂದ ಈ ಹಾದಿಯಲ್ಲಿ ಯಾತ್ರೆ ನಡೆಯುತ್ತಿದ್ದು, ಇದು ಭಾರತದ ಅವಿಭಾಜ್ಯ ಅಂಗವಾಗಿದೆ ಎಂದು ಹೇಳುವ ಮೂಲಕ ಗಡಿ ವಿಚಾರದಲ್ಲಿ ನೇಪಾಳದ ಹಸ್ತಕ್ಷೇಪವನ್ನು ಭಾರತ ಖಂಡಿಸಿದೆ.

**<>><><*><><<>**

ಉತ್ತರಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಇಂದು ಆಯೋಜಿಸಲಾಗಿರುವ ನಾರ್ಥ್‌ಟೆಕ್ ಸಿಂಪೋಜಿಯಂ ವಿಚಾರ ಸಂಕಿರಣವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಉದ್ಘಾಟಿಸಿದರು. 'ರಕ್ಷಾ ತ್ರಿವೇಣಿ ಸಂಗಮ - ತಂತ್ರಜ್ಞಾನ, ಉದ್ಯಮ ಮತ್ತು ಸೇನಾ ಸಂಗಮ' ಎಂಬ ವಿಷಯದ ಅಡಿಯಲ್ಲಿ ಈ ಕಾರ್ಯಕ್ರಮ ನಡೆಯುತ್ತಿದೆ. ಕಾರ್ಯಾಚರಣೆಯ ಸವಾಲುಗಳನ್ನು ಎದುರಿಸಲು ಅತ್ಯಾಧುನಿಕ ಸ್ವದೇಶಿ ತಂತ್ರಜ್ಞಾನಗಳನ್ನು ಪ್ರದರ್ಶಿಸಲು ಮತ್ತು ಸಂಯೋಜಿಸಲು ಈ ವಿಚಾರಗೋಷ್ಠಿಯು ಒಂದು ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ಪ್ರದರ್ಶನದಲ್ಲಿ ಎಂಎಸ್‌ಎಂಇಗಳು, ಖಾಸಗಿ ರಕ್ಷಣಾ ತಂತ್ರಜ್ಞಾನ ಸಂಸ್ಥೆಗಳು, ಸ್ಟಾರ್ಟ್‌ಅಪ್‌ಗಳು ಮತ್ತು ದೇಶಾದ್ಯಂತದ ನಾವೀನ್ಯಕಾರರು ಸೇರಿದಂತೆ ಅನೇಕರು ಭಾಗವಹಿಸಿದ್ದಾರೆ. ಸುಮಾರು ೨೮೦ ಕ್ಕೂ ಹೆಚ್ಚು ಕಂಪನಿಗಳು ತಮ್ಮ ಇತ್ತೀಚಿನ ಆವಿಷ್ಕಾರಗಳು ಮತ್ತು ತಂತ್ರಜ್ಞಾನಗಳನ್ನು ಪ್ರದರ್ಶಿಸಲು ಮಳಿಗೆಗಳನ್ನು ಸ್ಥಾಪಿಸಿವೆ. ಭಾರತೀಯ ಸೇನೆಯ

ಉತ್ತರ ಮತ್ತು ಮಧ್ಯ ಕಮಾಂಡ್ ಹಾಗೂ ಭಾರತೀಯ ರಕ್ಷಣಾ ತಯಾರಕರ ಸಂಘ ಜಂಟಿಯಾಗಿ ಈ ಮೂರು ದಿನಗಳ ಕಾರ್ಯಕ್ರಮವನ್ನು ಆಯೋಜಿಸಿವೆ.

<>><><*><><<>

ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಅವರು ಬುಡಕಟ್ಟು ಸಮುದಾಯದ ದೀರ್ಘಕಾಲದ ಬೇಡಿಕೆಯಾದ ಪ್ರತ್ಯೇಕ 'ಸರ್ನಾ' ಧರ್ಮ ಕೋಡ್ ಅನ್ನು ೨೦೨೭ರ ಜನಗಣತಿಯಲ್ಲಿ ಸೇರ್ಪಡಿಸಬೇಕೆಂದು ಮತ್ತೊಮ್ಮೆ ಬಲವಾಗಿ ಒತ್ತಾಯಿಸಿದ್ದಾರೆ. ಈ ಕುರಿತು ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಮತ್ತು ರಾಜ್ಯಪಾಲ ಸಂತೋಷ್ ಕುಮಾರ್ ಗಂಗ್ವಾರ್ ಅವರಿಗೆ ಪತ್ರ ಬರೆದಿದ್ದಾರೆ. ಈ ವಿಷಯವು ಲಕ್ಷಾಂತರ ಬುಡಕಟ್ಟು ಜನರ ನಂಬಿಕೆ, ಅಸ್ಮಿತೆ ಮತ್ತು ಸಾಂವಿಧಾನಿಕ ಹಕ್ಕುಗಳಿಗೆ ಸಂಬಂಧಿಸಿದ್ದಾಗಿದೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಜನಗಣತಿಯು ಕೇವಲ ಜನಸಂಖ್ಯೆಯ ಲೆಕ್ಕಾಚಾರವಲ್ಲ, ಬದಲಿಗೆ ಸಮಾಜದ ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕ ರಚನೆಯನ್ನು ಅರ್ಥಮಾಡಿಕೊಳ್ಳುವ ಪ್ರಮುಖ ಸಾಧನವಾಗಿದೆ ಎಂದು ಮುಖ್ಯಮಂತ್ರಿ ಪ್ರತಿಪಾದಿಸಿದ್ದಾರೆ.

<>><><*><><<>

ಮುಂಬೈ ವಾಂಖೆಡೆ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಗುಜರಾತ್ ಟೈಟಾನ್ಸ್ ತಂಡ ೪ ವಿಕೆಟ್‌ಗಳ ರೋಚಕ ಜಯ ದಾಖಲಿಸಿದೆ.

<>><><*><><<>

ರಷ್ಯಾದ ನಿಕಟ ಮಿತ್ರರಾಷ್ಟ್ರವೆಂದು ಗುರುತಿಸಲ್ಪಟ್ಟಿರುವ ಆರ್ಮೇನಿಯಾದಲ್ಲಿ ಇದೇ ಮೊದಲ ಬಾರಿಗೆ ಬೃಹತ್ ಯುರೋಪಿಯನ್ ಶೃಂಗಸಭೆ ಆಯೋಜನೆಯಾಗುತ್ತಿದೆ. ೩೦ಕ್ಕೂ ಹೆಚ್ಚು ಐರೋಪ್ಯ ನಾಯಕರು ಮತ್ತು ಕೆನಡಾ ಪ್ರಧಾನಿ ಐರೋಪ್ಯ ರಾಜಕೀಯ ಸಮುದಾಯ ಇಪಿಸಿ ಶೃಂಗಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಇದರ ನಡುವೆಯೇ, ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ಅವರನ್ನು ಆರ್ಮೇನಿಯಾದಲ್ಲಿ ಭೇಟಿಯಾಗಿ ರಕ್ಷಣಾ ಸಹಕಾರ ಮತ್ತು ರಷ್ಯಾದ ಮೇಲಿನ ಆರ್ಥಿಕ ನಿರ್ಬಂಧಗಳ ಕುರಿತು ಗಂಭೀರ ಚರ್ಚೆ ನಡೆಸಿದ್ದಾರೆ. ಈ ಭೇಟಿಯು ಯುರೋಪಿಯನ್ ಒಕ್ಕೂಟ ಮತ್ತು ಆರ್ಮೇನಿಯಾ ನಡುವಿನ ಸಂಬಂಧದಲ್ಲಿ ಹೊಸ ಅಧ್ಯಾಯಕ್ಕೆ ನಾಂದಿ ಹಾಡಲಿದೆ ಎಂದು ವಿಶ್ಲೇಷಿಸಲಾಗುತ್ತಿದೆ.

<><><*><><<>

ಬೋಟ್ಸ್ವಾನದಲ್ಲಿ ನಡೆದ ವಿಶ್ವ ಅಥ್ಲೆಟಿಕ್ಸ್ ರಿಲೇ ಕೂಟದಲ್ಲಿ ಭಾರತದ ತಂಡಗಳು ನಿರೀಕ್ಷಿತ ಮಟ್ಟದ ಯಶಸ್ಸು ಕಾಣದಿದ್ದರೂ, ರಾಷ್ಟ್ರೀಯ ದಾಖಲೆಯೊಂದನ್ನು ಬರೆಯುವಲ್ಲಿ ಯಶಸ್ವಿಯಾಗಿವೆ. ಮಿಶ್ರ ೪x೧೦೦ ಮೀಟರ್ ರಿಲೇ ತಂಡವು ೪೧.೭೫ ಸೆಕೆಂಡುಗಳಲ್ಲಿ ಗುರಿ ತಲುಪಿ ಹೊಸ ದಾಖಲೆ ನಿರ್ಮಿಸಿತು. ಆದರೆ, ಒಟ್ಟಾರೆ ಫಲಿತಾಂಶದಲ್ಲಿ ಭಾರತದ ಐದೂ ತಂಡಗಳು ೨೦೨೭ರ ವಿಶ್ವ ಚಾಂಪಿಯನ್‌ಶಿಪ್‌ಗೆ ಅರ್ಹತೆ ಪಡೆಯುವಲ್ಲಿ ವಿಫಲವಾಗಿವೆ. ಪುರುಷರ ೪x೧೦೦ ಮೀಟರ್ ತಂಡವು ಗಾಯದ ಸಮಸ್ಯೆಯಿಂದ ಸ್ಪರ್ಧೆ ಪೂರ್ಣಗೊಳಿಸಲು ಸಾಧ್ಯವಾಗದಿದ್ದರೆ, ೪x೧೦೦ ಮೀಟರ್ ತಂಡವು ಬ್ಯಾಟನ್ ಕೈಬಿಟ್ಟ ಕಾರಣ ಅನರ್ಹಗೊಂಡಿತು. ಮಹಿಳೆಯರ ಮತ್ತು ಇತರ ಮಿಶ್ರ ತಂಡಗಳು ಕೂಡ ಅರ್ಹತಾ ಮಟ್ಟ ತಲುಪಲು ಸಾಧ್ಯವಾಗದೆ ನಿರಾಸೆ ಅನುಭವಿಸಿದವು.

<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೨.೩೦ ಕ್ಕೆ ><><<>